ಸದನದಲ್ಲಿ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಶುಕ್ರವಾರ, ದಿನಾಂಕ : 06 ನೇ ಮಾರ್ಚ್, 2020

ರಾಜ್ಯಕ್ಕೆ ವಿವಿಧ ಭಾಗಗಳಿಂದ ವಲಸೆ ಬರುತ್ತಿರುವವರ ಬಗ್ಗೆ

ಡಾ. ಜೈಮಾಲ ರಾಮಚಂದ್ರ (ನಾಮನಿರ್ದೇಶನ ಹೊಂದಿದವರು) :-

047 (470) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಇತ್ತೀಚಿನ ವರ್ಷಗಳಲ್ಲಿ ರಾಜ್ಯಕ್ಕೆ ಎಲ್ಲಾ ಭಾಗಗಳಲ್ಲಿಯೂ ರಾಷ್ಟ್ರದ ವಿವಿಧ ರಾಜ್ಯಗಳಿಂದ ಸಾವಿರಾರು ಜನ ವಲಸೆ ಬರುತ್ತಿದ್ದು, ಹೀಗೆ ವಲಸೆ ಬರುವ ಕುಟುಂಬಗಳ ಜೊತೆ ಮಕ್ಕಳೂ ಸಹ ಬರುತ್ತಿರುವುದು ಸರ್ಕಾರದ ಗಮನದಲ್ಲಿದೆಯೇ ;

(ಆ) ಪ್ರತಿ ವರ್ಷ ರಾಜ್ಯಕ್ಕೆ ಎಷ್ಟು ಮಕ್ಕಳು ತಮ್ಮ ಕುಟುಂಬದ ಜೊತೆ ವಲಸೆ ಬರುತ್ತಿದ್ದಾರೆ ;

(ಇ) ವಲಸೆ ಕುಟುಂಬಗಳ ಮಕ್ಕಳ ಪ್ರಾಥಮಿಕ ಪೂರ್ವ ಶಿಕ್ಷಣ ಅಭಿವೃದ್ಧಿ, ಆರೋಗ್ಯ ರಕ್ಷಣೆ, ಶಾಲಾ ಶಿಕ್ಷಣ ಇವೆ ಮೊದಲಾದವುಗಳ ಕುರಿತು ರಾಜ್ಯ ಸರ್ಕಾರ ಕೈಗೊಂಡಿರುವ ಕ್ರಮಗಳೇನು ಮತ್ತು ಯೋಜನೆಗಳೇನು ; (ವಿವರ ನೀಡುವುದು)

(ಈ) ರಾಜ್ಯದ ಪ್ರತಿಯೊಂದು ಜಿಲ್ಲೆಯಲ್ಲಿಯೂ ವಲಸೆ ಮಕ್ಕಳ ಕುರಿತು ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ವಿವರ ನೀಡುವುದು)